# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 136 (142) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 10.12.2024 |
| ಉತ್ತರಿಸುವ ಸಚಿವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರಿ ತಾಲ್ಲೂಕಿನಲ್ಲಿ ಬಳಕುಂಜ ಪ್ರದೇಶಗಳಲ್ಲಿ ಕೈಗಾರಿಕೆ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಎಷ್ಟು ಜಮೀನು ಸ್ವಾಧೀನಪಡಿಸಲು ಕ್ರಮಕೈಗೊಳ್ಳಲಾಗಿದೆ; (ವಿವರ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆ, ಮೂಲ್ಕಿ ತಾಲೂಕು ಕೊಲ್ಲೂರು, ಬಳಕುಂಜೆ ಮತ್ತು ಉಳೆಪಾಡಿ ಗ್ರಾಮಗಳಲ್ಲಿ 949.73 ಎಕರೆ ಖಾಸಗಿ, 141.84 ಎಕರೆ ಸರ್ಕಾರಿ ಜಮೀನಿನಂತೆ ಒಟ್ಟು 1091.57 ಎಕರೆ ಜಮೀನಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಕಾಯ್ದೆ 1966 ರ ಕಲಂ 28(1) ರಡಿ ದಿನಾಂಕ: 07.01.2022ರಂದು ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br><br>ಕಲಂ 28(2) ರಡಿ ಭೂಮಾಲೀಕರಿಗೆ ನೋಟೀಸು ನೀಡಿ ಕಲಂ 28(3) ರ ವಿಚಾರಣೆ ನಡೆಸಲಾಗಿದೆ. ಅಂತಿಮ ಅಧಿಸೂಚನೆಯ ಪೂರ್ವಭಾವಿಯಾಗಿ ಡ್ರೋನ್ ಸರ್ವೆ ಕಾರ್ಯ ನಡೆಸಬೇಕಾಗಿದ್ದು, ಕಾರ್ಯ ಪ್ರಗತಿಯಲ್ಲಿರುತ್ತದೆ. |
| ಆ) | ಈ ಪ್ರದೇಶದಲ್ಲಿ ರೈತಾಪಿ ವರ್ಗದ ಜನರು ಹೆಚ್ಚು ವಾಸಿಸುತ್ತಿರುವುದರಿಂದ ರೈತರ ಕೃಷಿ ಭೂಮಿಗಳಾಗಿದ್ದು, ಕೆಐಡಿಬಿ ವತಿಯಿಂದ ಸ್ವಾಧೀನಪಡಿಸಲು ಉದ್ದೇಶಿಸಿರುವುದರಿಂದ ರೈತರು ತಮ್ಮ ಜೀವನೋಪಾಯದ ಭೂಮಿ ಕಳೆದುಕೊಳ್ಳುವುದರಿಂದ ಈ ಪ್ರಸ್ತಾವನೆ ಕೈಬಿಡಬೇಕೆಂದು ಸ್ಥಳೀಯರು ಒತ್ತಾಯಿಸುತ್ತಿದ್ದರೂ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು; (ವಿವರ ನೀಡುವುದು) | ಹೆಚ್ಚಿನ ಭೂಮಾಲೀಕರು ಭೂಸ್ವಾಧೀನತೆಗೆ ಒಪ್ಪಿಗೆ ಸೂಚಿಸಿರುತ್ತಾರೆ.<br><br>ಉಳಿದ ಭೂಮಾಲೀಕರಿಗೆ ಸಂಬಂಧಿಸಿದಂತೆ ಕಲಂ 28(4)ರ ಕರಡು ಅಧಿಸೂಚನೆಯ ಪ್ರಸ್ತಾವನೆಯನ್ನು ಸಲ್ಲಿಸುವಾಗ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತದೆ. |

..2

| | | |
|---|---|---|
| ಇ) | ಖಾಸಗಿ ಭೂಮಿಯನ್ನು ಸ್ವಾಧೀನಪಡಿಸಲು ಸರ್ಕಾರವು ಜನರ ಅಭಿಪ್ರಾಯ ಪಡೆಯದೆ ಗೂಂಡಾಗಳ ಮೂಲಕ ಬೆದರಿಕೆ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು) | ಈ ಕುರಿತಂತೆ ಈವರೆಗೆ ಯಾವುದೇ ಭೂಮಾಲೀಕರಿಂದ ದೂರುಗಳು ಬಂದಿರುವುದಿಲ್ಲ. |
| ಈ) | ಬಳಕುಂಜೆ ಪ್ರದೇಶದಲ್ಲಿ ಯಾವ ಯೋಜನೆಗಾಗಿ ಭೂಮಿಯನ್ನು ವಶಪಡಿಸಿಕೊಳ್ಳಲಾಗುತ್ತಿದೆ? (ವಿವರ ನೀಡುವುದು) | ಕೈಗಾರಿಕಾ ಪ್ರದೇಶಾಭಿವೃದ್ಧಿ ಯೋಜನೆಗಾಗಿ ಬಳಕುಂಜೆ ಪ್ರದೇಶದಲ್ಲಿ ಭೂಮಿಯನ್ನು ವಶಪಡಿಸಿಕೊಳ್ಳಲಾಗುತ್ತಿದೆ. |

**ಸಂಖ್ಯೆ: ಸಿಐ 491 ಐಎಪಿ 2024**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು